ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಗೊಟ್ಟಿಗೆರೆ ವಾರ್ಡ್ ಸಂಖ್ಯೆ: 194**

ವಾರ್ಡ್ ಕಛೇರಿಯಲ್ಲಿ ದಿನಾಂಕ: 16-07-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು

1. ಅಧ್ಯಕ್ಷರು, ಗೊಟ್ಟಿಗೆರೆ, ವಾರ್ಡ್ ಸಮಿತಿ, ವಾರ್ಡ್ ನಂ.194, ಬಿಬಿಎಂಪಿ
2. ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಕಾರ್ಯದರ್ಶಿಗಳು ವಾರ್ಡ್ ನಂ.194, ಗೊಟ್ಟಿಗೆರೆ.
3. ಸಹಾಯಕ ಅಭಿಯಂತರರು ಗೊಟ್ಟಿಗೆರೆ ವಾರ್ಡ್ ನಂ.194, ಬಿಬಿಎಂಪಿ
4. ವೈದ್ಯಾಧಿಕಾರಿಗಳು. ಗೊಟ್ಟಿಗೆರೆ.
5. ಸಹಾಯಕ ಅಭಿಯಂತರರು(ಬೆಸ್ಕಾಂ).
6. ಸಹಾಯಕ ಅಭಿಯಂತರರು (ಬಿಡಬ್ಲ್ಯೂಎಸ್‌ಎಸ್‌ಬಿ)
7. ಅರಣ್ಯಾಧಿಕಾರಿಗಳು ಗೊಟ್ಟಿಗೆರೆ ವಾರ್ಡ್ ನಂ.194, ಬಿಬಿಎಂಪಿ
8. ಅಧ್ಯಕ್ಷರು, ಕ್ಲಾಸಿಕ್ ಆರ್ಚರ್ಡ್ಸ್ , ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್, ಗೊಟ್ಟಗೆರೆ
9. ಅಧ್ಯಕ್ಷರು. ಸೌತ್ ಅವಿನ್ಯೂ ಬಡಾವಣೆ ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್. ಗೊಟ್ಟಗೆರೆ

ದಿನಾಂಕ: 16.07.2022 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಸಮಿತಿ ಸಭೆಯಲ್ಲಿ ಅಧ್ಯಕ್ಷರು ಸಭೆಯಲ್ಲಿ ಎಲ್ಲರನ್ನು ಸ್ವಾಗತಿಸುತ್ತಾ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. **ಆರೋಗ್ಯ ವಿಭಾಗಕ್ಕೆ ಸಂಬಂಧಪಟ್ಟ ವಿಷಯಗಳು:**

i) ಸರ್ಕಾರದ ಆದೇಶದನ್ವಯ 18 ವರ್ಷದ ಮೇಲ್ಪಟ್ಟ ಎಲ್ಲಾ ಸಾರ್ವಜನಿಕರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಉಚಿತವಾಗಿ ಮುನ್ನೆಚರಿಕೆ ಲಸಿಕೆಯನ್ನು ಪಡೆಯಬಹುದಾಗಿದ್ದು ಅರ್ಹ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಲು ತಿಳಿಸಲಾಯಿತು.

ii) ವೈದ್ಯಾಧಿಕಾರಿಗಳು ಚಿಕನ್ ಗುನ್ಯ, ಕಾಲರಾ ಕಾಯಿಲೆಗಳು ಬಾರದಿರುವಂತೆ ಮುನ್ನೆಚರಿಕೆ ವಹಿಸುವ ಬಗ್ಗೆ ಅರಿವು ಮೂಡಿಸಿದರು.

2. **ಘನತ್ಯಾಜ್ಯ ನಿರ್ವಹಣೆ ಬಗ್ಗೆ :-**

i) ಹಿಂದಿನ ಸಭೆಯಲ್ಲಿ ಸೌತ್ ಅವಿನ್ಯೂ, ಬಡಾವಣೆಯಲ್ಲಿ ಆಟೋ ಟಿಪ್ಪರ್‌ಗಳು ದಿನನಿತ್ಯ ಬರುತ್ತಿಲ್ಲ ಎಂದು ಬಡಾವಣೆಯ ನಿವಾಸಿಗಳು ತಿಳಿಸಿದ್ದರು. ಆರೋಗ್ಯ ಪರಿವೀಕ್ಷಕರು ಆಟೋ ಟಿಪ್ಪರ್‌ಗಳು ಈಗ ದಿನನಿತ್ಯ ಹೋಗುತ್ತಿರುವುದಾಗಿ ತಿಳಿಸಿದರು.ಸದರಿ ವಾಹನಗಳಲ್ಲಿ ಅಳವಡಿಸಿರುವ ಸ್ಪೀಕರ್‌ಗಳಲ್ಲಿ ಘನತ್ಯಾಜ್ಯ ನಿರ್ವಹಣೆಯ ಆಡಿಯೋವನ್ನು Play ಮಾಡಲು ತಿಳಿಸಲಾಯಿತು.

ii) Blink it ಮಳಿಗೆಯ ದೂರಿಗೆ ಸಂಬಂಧಪಟ್ಟಂತೆ ಆರೋಗ್ಯ ಪರಿವೀಕ್ಷಕರು ಸ್ಥಳಕ್ಕೆ ಭೇಟಿ ನೀಡಿ ಪ್ಲಾಸ್ಟಿಕ್‌ನ್ನು ಸೀಸ್ ಮಾಡಿ ದಂಡ ವಿಧಿಸಿರುವುದಾಗಿ ಸಭೆಗೆ ತಿಳಿಸಿದರು.

iii) ಲೋಯಲಾ ಸ್ಕೂಲ್ ರಸ್ತೆಯಲ್ಲಿ ಹೊಸದಾಗಿ ಮಯೂರ ಬೇಕರಿ ತೆರೆದಿದ್ದು ಪಕ್ಕದಲ್ಲಿದ್ದBlack spot ಅನ್ನು ತೆರವುಗೊಳಿಸಿರುವುದಗಿ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.

Scanned by CamScanner

3. ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಸಂಬಂಧಿಸಿದ ವಿಷಯಗಳ ಬಗ್ಗೆ.

i) ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಏರಿಳಿತದ ಬಗ್ಗೆ ಪರಿಶೀಲಿಸಿ ಅಗತ್ಯ ಕ್ರಮವಿಡಲು ಸಂಬಂಧ ಪಟ್ಟ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ii) ಸೌಥ್ ಅವಿನ್ಯೂ ಲೇ ಔಟ್‌ನಲ್ಲಿ ವಿದ್ಯುತ್ ಲೈನ್‌ಗಳ ಬಳಿ ಮರದ ಕೊಂಬೆಗಳು ಬೆಳೆದಿದ್ದು ಅದನ್ನು ತೆರವುಗೊಳಿಸಲು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ತಿಳಿಸಲಾಯಿತು.

4.ಬಿ.ಡಬ್ಲ್ಯೂ.ಎಸ್.ಎಸ್.ಬಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

i) ಕ್ಲಾಸಿಕ್ ಆರ್ಚರ್ಡ್ ಗೇಟ್ ಬಳಿ ಒಳಚರಂಡಿ ವ್ಯವಸ್ಥೆಯ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ಅಧ್ಯಕ್ಷರು ಕೋರಿದ್ದು ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ರವರು ಹಿಂದಿನ ಸಭೆಯಲ್ಲಿ ತಿಳಿಸಿರುವಂತೆ ಕೂಡಲೇ ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಲು ತಿಳಿಸಲಾಯಿತು. ಮುಂದುವರೆದು ಒಳಚರಂಡಿ ಯಿಂದಾಗಿ ರಸ್ತೆಯು Sink ಆಗುತ್ತಿದ್ದು ಈ ಬಗ್ಗೆ ವಾರ್ಡ್ ಅಭಿಯಂತರರೊಂದಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಯಿತು.

ii) ಸೌಥ್ ಅವಿನ್ಯೂ ಬಡಾವಣೆಯಲ್ಲಿ ಒಳಚರಂಡಿ ನೀರು ನಿಶ್ಚಲತೆಯಿಂದ ತೊಂದರೆ ಉಂಟಾಗಿದ್ದು ಈ ಸಂಬಂಧ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮವಿಡಲು ಸೂಚಿಸಲಾಯಿತು.

iii) ಬನ್ನೇರುಘಟ್ಟ ಮುಖ್ಯ ರಸ್ತೆಯಲ್ಲಿರುವ ಡಿ-ಮಾರ್ಟ್ ಮುಂದೆ ಒಳಚರಂಡಿ ದುರಸ್ಥಿ ಕಾಮಗಾರಿಯನ್ನು ಕೈಗೊಳ್ಳಲು ಪಾಲಿಕೆ ಅಭಿಯಂತರರೊಂದಿಗೆ ರಸ್ತೆ ಅಗೆಯಲು ಅನುಮತಿ ಕೋರಿ ಪತ್ರ ಬರೆದಿರುವುದಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಭಿಯಂತರರು ತಿಳಿಸಿದರು. ವಾರ್ಡ್ ಅಭಿಯಂತರರು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಈ ಸಂಬಂಧ ಸಮನ್ವಯಿಸಲು ಸೂಚಿಸಲಾಯಿತು.

5. ಕಾಮಗಾರಿಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

i) ಗೊಟ್ಟಿಗೆರೆ ಮುಖ್ಯ ರಸ್ತೆ, ಸೌಥ್ ಅವಿನ್ಯೂ ಬಡಾವಣೆಯ ರಸ್ತೆಗಳಲ್ಲಿ ಗುಂಡಿಗಳು ಕಂಡು ಬಂದಿದ್ದು ವಾರ್ಡ್ ಅಭಿಯಂತರರು ಸ್ಥಳ ಪರಿಶೀಲಿಸಿ ಅಗತ್ಯ ದುರಸ್ಥಿ ಕಾರ್ಯವನ್ನು ಕೈಗೊಳ್ಳಲು ತಿಳಿಸಲಾಯಿತು.

6. ಮಳೆ ನೀರು ಚರಂಡಿ ಗೆ ಸಂಬಂಧಿಸಿದ ವಿಷಯಗಳ ಬಗ್ಗೆ.

i) ಕ್ಲಾಸಿಕ್ ಆರ್ಚರ್ಡ್ಸ್ ಬಡಾವಣೆ ಗೇಟ್ ಬಳಿ Culvert ಕಾಮಗಾರಿಯನ್ನು ಕೈಗೊಳ್ಳಲು ಈಗಾಗಲೇ ಟೆಂಡರ್ ಕರೆಯಲಾಗಿದ್ದು ಶೀಘ್ರದಲ್ಲಿ ನಿರ್ಮಿಸುವುದಾಗಿ ಅಭಿಯಂತರರು ತಿಳಿಸಿದರು.

ಈ ಮೇಲೆ ತಿಳಿಸಿರುವ ಎಲ್ಲಾ ವಿಷಯ / ಸಮಸ್ಯೆಗಳ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮವಹಿಸಲು ಹಾಗೂ ಮುಂದಿನ ಸಭೆಗೆ ಅನುಪಾಲನಾವರದಿಯೊಂದಿಗೆ ಸಂಬಂಧಪಟ್ಟ ಅಧಿಕಾರಿಗಳು ಹಾಜರಾಗಲು ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು

Scanned by CamScanner

ಪ್ರತಿಯನ್ನು:-

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಜಂಟಿ ಆಯುಕ್ತರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
3. ಉಪ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನೆಗೆ ಸಲ್ಲಿಸಿದೆ.
5. ಅಧೀಕ್ಷಕ ಅಭಿಯಂತರರು (ಬೊಮ್ಮನಹಳ್ಳಿ) ರವರ ಅವಗಾಹನಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ, ಗೊಟ್ಟಿಗೆರೆ ರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),ಗೊಟ್ಟಿಗೆರೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸದೆ.
8. ಸಹಾಯಕ ನಿರ್ದೇಶಕರು (ಪಶುಪಾಲನೆ), ಗೊಟ್ಟಿಗೆರೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೊಮ್ಮನಹಳ್ಳಿ) ವಲಯ ಬಿಬಿಎಂಪಿ.
10. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ.
11. ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು, ಬಿಬಿಎಂಪಿ
12. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ ಬಿಬಿಎಂಪಿ.
13. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ ಬಿಬಿಎಂಪಿ.
14. ತೋಟಗಾರಿಕೆ ಅಧೀಕ್ಷಕರು, ಬೊಮ್ಮನಹಳ್ಳಿ ವಲಯ.
15. ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣಾ ವಿಭಾಗ.
17. ಸಹಾಯಕ ಕಂದಾಯ ಅಧಿಕಾರಿ ಅಂಜನಾಪುರ ವಿಭಾಗ.
18. ಕಲ್ಯಾಣಾಧಿಕಾರಿಗಳು ಬೊಮ್ಮನಹಳ್ಳಿ ವಲಯ.
19. ಉಪವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಬೊಮ್ಮನಹಳ್ಳಿ ವಲಯ.
20. ಪೋಲೀಸ್ ಇನ್ಸಪೆಕ್ಟರ್, ಹುಳಿಮಾವು ಮತ್ತು ಕೋಣನಕುಂಟೆ ಪೋಲೀಸ್ ಠಾಣೆ.
21. ಕಂದಾಯ ಅಧಿಕಾರಿಗಳು, ಅಂಜನಾಪುರ ಉಪ ವಲಯ.
22. ಸ್ಥಳೀಯ ನಾಗರಿಕಕಲ್ಯಾಣ ಸಂಸ್ಥೆಗಳು.

Scanned by CamScanner